ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ :   29-03-2021   ಪ್ರಶ್ನೆ ಸಂಖ್ಯೆ :   1982 (2313)

ಸದಸ್ಯರ ಹೆಸರು ಮತ್ತು ಕ್ಷೇತ್ರ :   ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ :   29-03-2021

ಉತ್ತರಿಸುವ ಸಚಿವರು:   ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ :   ಬಡ್ತಿ ಹೊಂದಿದ ಶಿಕ್ಷಕರುಗಳಿಗೆ ಕಾಲಮಿತಿ ಬಡ್ತಿ ನೀಡುವ ಬಗ್ಗೆ

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರುಗಳಿಗೆ 10, 15, 20, 25 ವರ್ಷಗಳ ಕಾಲಮಿತಿ ಬಡ್ತಿಯನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೇರೆ ಇಲಾಖೆಗಳಂತೆ ಸರ್ಕಾರ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಸಕಾಲಕ್ಕೆ ನಡೆಸದೆ ಅವರನ್ನು ಮಲತಾಯಿ ಮಕ್ಕಳಂತೆ ನಡೆಸಿಕೊಳ್ಳುತ್ತಿರುವುದೇಕೆ; ಶೀಘ್ರವಾಗಿ ಶಿಕ್ಷಕರ ವರ್ಗಾವಣೆ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರೌಢಶಾಲೆ ಸಹ ಶಿಕ್ಷಕ ಹುದ್ದೆಯಿಂದ ಪದವಿ ಪೂರ್ವ ಉಪನ್ಯಾಸಕ ಹುದ್ದೆಗೆ ಬಡ್ತಿ ಪ್ರಕ್ರಿಯೆಗೆ ಚಾಲನೆ ನೀಡಲು ಕೈಗೊಂಡಿರುವ ಕ್ರಮಗಳೇನು ;

(ಈ) ದೈಹಿಕ ಶಿಕ್ಷಣ ಶಿಕ್ಷಕರಿಗೆ ವೈದ್ಯನಾಥನ್ ವರದಿ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳೇನು ?